# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 651 |
| ಸದಸ್ಯರ ಹೆಸರು | : ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು . |
| ಉತ್ತರಿಸಬೇಕಾದ ದಿನಾಂಕ | : 21-02-2023. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಿಂದ ರಾಜ್ಯದ ಬಾಲಮಂದಿರಗಳಲ್ಲಿ ಎಷ್ಟು ಮಕ್ಕಳು ನಾಪತ್ತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ನಾಪತ್ತೆಯಾದ ಮಕ್ಕಳನ್ನು ಪತ್ತೆ ಹಚ್ಚಲು ಸರ್ಕಾರ ಕೈಗೊಂಡ ಕ್ರಮವೇನು; | ರಾಜ್ಯದಲ್ಲಿ ಕಳೆದ 03 ವರ್ಷಗಳಿಂದ ಒಟ್ಟು 110 ಮಕ್ಕಳು ಬಾಲಮಂದಿರಗಳಿಂದ ತಪ್ಪಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>ಬಾಲಮಂದಿರಗಳಿಂದ ನಾಪತ್ತೆಯಾದ ಮಕ್ಕಳ ಕುರಿತು ಸ್ಥಳೀಯ ಪೊಲೀಸ್ ಠಾಣೆಗಳಲ್ಲಿ ಎಫ್ .ಐ. ಆರ್ ದಾಖಲಿಸಲಾಗಿರುತ್ತದೆ. ಕಾಣೆಯಾದ ಮಕ್ಕಳನ್ನು ಪತ್ತೆ ಹಚ್ಚಲು ಪೊಲೀಸ್ ಇಲಾಖೆಯಿಂದ ಕ್ರಮ ವಹಿಸಲಾಗುತ್ತಿದೆ.<br>ಬಾಲಮಂದಿರಗಳಿಂದ ಮಕ್ಕಳು ತಪ್ಪಿಸಿಕೊಂಡು ಹೋಗದಂತೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:<br>1. ಬಾಲಮಂದಿರಗಳಿಂದ ಮಕ್ಕಳು ತಪ್ಪಿಸಿಕೊಂಡು ಹೋಗದಂತೆ, ನಿಯಮಿತವಾಗಿ ಮಕ್ಕಳಿಗೆ ಆಪ್ತ ಸಮಾಲೋಚನೆಯನ್ನು ಒದಗಿಸಲು ಎಲ್ಲಾ ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಸಮಾಲೋಚಕರನ್ನು ನೇಮಿಸಿ ಆಪ್ತ ಸಮಾಲೋಚನೆಯನ್ನು ಒದಗಿಸಲಾಗುತ್ತಿದೆ.<br>2. ಬಾಲಮಂದಿರಗಳಲ್ಲಿ ವಾಸ್ತವ್ಯ ಪಡೆದಿರುವ ಮಕ್ಕಳು ಬಾಲಮಂದಿರಗಳಿಂದ ತಪ್ಪಿಸಿಕೊಳ್ಳದಂತೆ ಅವರ ಮನಃ ಪರಿವರ್ತನೆಗಾಗಿ **"ಕಾಮನಬಿಲ್ಲು"** ಎಂಬ ಕಿರುಚಿತ್ರವನ್ನು ಸಿದ್ಧಪಡಿಸಲಾಗಿದೆ. ಸದರಿ ಚಿತ್ರದಲ್ಲಿ ಬಾಲಮಂದಿರಗಳಲ್ಲಿ ವಾಸ್ತವ್ಯ ಪಡೆಯುವುದರಿಂದ ಮಕ್ಕಳಿಗೆ ಊಟ, ವಸತಿ, ಶಿಕ್ಷಣ, ಕೌಶಲ್ಯ ಅಭಿವೃದ್ಧಿ ತರಬೇತಿಯೊಂದಿಗೆ ಉದ್ಯೋಗಾಧಾರಿತ ತರಬೇತಿಗಳನ್ನು ನೀಡುವ ಮೂಲಕ ಮಕ್ಕಳನ್ನು ಸಮಾಜದ ಮುಖ್ಯವಾಹಿನಿಗೆ ಯಶಸ್ವಿಯಾಗಿ ಸೇರ್ಪಡೆಗೊಳಿಸುವ ಬಗ್ಗೆ ಹಾಗೂ ಮಕ್ಕಳು ಬಾಲಮಂದಿರಗಳಿಂದ ತಪ್ಪಿಸಿಕೊಂಡಲ್ಲಿ, ಸಮಾಜದಲ್ಲಿ ಎದುರಿಸಬೇಕಾದಂತಹ ಸಮಸ್ಯೆಗಳಾದ ಭಿಕ್ಷಾಟನೆ, ಲೈಂಗಿಕ ದೌರ್ಜನ್ಯ, ಮಕ್ಕಳ ಸಾಗಣಿಕೆ, ಬಾಲ ಕಾರ್ಮಿಕತೆ ಒಳಗಾದಂತಹ ಮಕ್ಕಳು ಎದುರಿಸುವ ಕಷ್ಟಕರ ಪರಿಸ್ಥಿತಿಗಳ ಬಗ್ಗೆ ಅರಿವು ಮೂಡಿಸಲು ಈ ಕಿರುಚಿತ್ರವನ್ನು ಬಾಲಮಂದಿರಗಳಲ್ಲಿ ನಿಯಮಿತವಾಗಿ ಪ್ರದರ್ಶಿಸಲಾಗುತ್ತಿದೆ.<br>3. ಮಕ್ಕಳ ಪಾಲನಾ ಸಂಸ್ಥೆಯಲ್ಲಿರುವ ಮಕ್ಕಳನ್ನು ಕ್ರಿಯಾತ್ಮಕ ಚಟುವಟಿಕೆಗಳಲ್ಲಿ ತೊಡಗಿಸುವ ಉದ್ದೇಶದಿಂದ ಮಕ್ಕಳ ಜಾಗೃತಿ ಸಂಸ್ಥೆಯ ಸಹಯೋಗದೊಂದಿಗೆ ಕ್ರೀಡೆ, ಆಟಗಳು, ಏರೋಬಿಕ್ಸ್, |

| | | |
|---|---|---|
| | | ಡಾನ್ಸ್ ತರಬೇತಿ ಕಾರ್ಯಕ್ರಮ, ಚಿತ್ರಕಲೆ,ಕವನ, ನಾಟಕಗಳನ್ನು ಆಯೋಜಿಸಲಾಗಿದೆ.<br>4. ಮಕ್ಕಳಿಗೆ ನುರಿತ ತಜ್ಞರಿಂದ ಆಪ್ತ ಸಮಾಲೋಚನೆಯನ್ನು ನೀಡಲಾಗುತ್ತಿದೆ.<br>5. ಮಕ್ಕಳ ಪಾಲನಾ ಸಂಸ್ಥೆಗಳಿಂದ ಮಕ್ಕಳು ತಪ್ಪಿಸಿಕೊಳ್ಳದಂತೆ ದಿನದ 24 ಗಂಟೆ ಕಣ್ಗಾವಲಿಡಲು ಸಿಸಿ ಟಿವಿಯನ್ನು ಅಳವಡಿಸಲಾಗಿದೆ.<br>6. ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಮಕ್ಕಳಿಗೆ ಸಸ್ಯಹಾರ ಹಾಗೂ ಮಾಂಸಾಹಾರವನ್ನೊಳಗೊಂಡ ಸಮತೋಲನ ಪೌಷ್ಠಿಕ ಆಹಾರವನ್ನು ಒದಗಿಸಲಾಗುತ್ತಿದೆ.<br>7. ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಪೊಲೀಸ್ ಇಲಾಖೆಯ Industrial Security Forceನ ನುರಿತ ಸಿಬ್ಬಂದಿಯನ್ನು ನಿಯೋಜನೆ ಮೇರೆಗೆ ನೇಮಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |
| ಆ) | ನಾಪತ್ತೆಯಾದ ಎಷ್ಟು ಮಕ್ಕಳನ್ನು ಪತ್ತೆ ಹಚ್ಚಿ ಮತ್ತೆ ಬಾಲ ಮಂದಿರಗಳಿಗೆ ದಾಖಲಾತಿ ಮಾಡಲಾಗಿದೆ; ಮಕ್ಕಳು ನಾಪತ್ತೆಯಾಗಲು ಕಾರಣ ಗಳೇನು; | ನಾಪತ್ತೆಯಾದ 24 ಮಕ್ಕಳನ್ನು ಪತ್ತೆ ಹಚ್ಚಿ ಆಪ್ತ ಸಮಾಲೋಚನೆಯನ್ನು ಒದಗಿಸಿ ಬಾಲಮಂದಿರಗಳಿಗೆ ದಾಖಲಿಸಿಕೊಳ್ಳಲಾಗಿರುತ್ತದೆ.<br>ಮಕ್ಕಳಿಗೆ ಹೊರಗಿನ ಪ್ರಪಂಚದ ಬಗೆಗಿನ ಹೆಚ್ಚಿನ ಕುತೂಹಲದಿಂದ ಮಕ್ಕಳು ಬಾಲಮಂದಿರಗಳಿಂದ ತಪ್ಪಿಸಿಕೊಳ್ಳಲು ಕಾರಣವಾಗಿದೆ. |
| ಇ) | ಮಾನವ ಕಳ್ಳಸಾಗಾಣಿಕೆ ಯನ್ನು ತಡೆಯಲು ಸರ್ಕಾರವು ತಗೆದು ಕೊಂಡಿರುವ ಕ್ರಮಗಳೇನು? | ಮಹಿಳೆಯರ ಮತ್ತು ಮಕ್ಕಳ ಅಕ್ರಮ ಸಾಗಾಣಿಕೆ ತಡೆಗಟ್ಟಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳು ಈ ಕೆಳಗಿನಂತಿವೆ.<br>1. ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಯುವ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕಾವಲು ಸಮಿತಿಗಳನ್ನು ರಚಿಸಲು ಹಾಗೂ ಕಾವಲು ಸಮಿತಿ ಸದಸ್ಯರ ಜವಾಬ್ದಾರಿಗಳ ಬಗ್ಗೆ ಸರ್ಕಾರದಿಂದ ದಿನಾಂಕ:06-08-2019 ರಂದು ಆದೇಶ ಹೊರಡಿಸಲಾಗಿದೆ.<br>2. ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆ ಕುರಿತು ಅರಿವು ಮೂಡಿಸಲು, ವಿವಿಧ ಇಲಾಖೆಗಳ ಜವಾಬ್ದಾರಿ ಕುರಿತು ಹಾಗೂ ಪ್ರಕರಣಗಳು ದಾಖಲಾಗಿದ್ದಲ್ಲಿ ಅನುಸರಿಸಬೇಕಾದ ಕ್ರಮಗಳ ಕುರಿತು ಕ್ರಮ ಬದ್ಧ ಕಾರ್ಯವಿಧಾನದ ಮಾರ್ಗಸೂಚಿಯನ್ನು ಸಿದ್ಧಪಡಿಸಿ ಸಂಬಂಧಪಟ್ಟ ಇಲಾಖೆಗಳಿಗೆ ವಿತರಿಸಲಾಗಿದೆ. ಹಾಗೂ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.<br>3. 2022-23 ನೇ ಸಾಲಿನಲ್ಲಿ ಮಹಿಳೆಯರ ಮತ್ತು ಮಕ್ಕಳ ಅಕ್ರಮ ಸಾಗಾಣಿಕೆ ತಡೆಗಟ್ಟುವ ಕುರಿತು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ ಇವರ ಸಹಯೋಗದೊಂದಿಗೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕಾವಲು ಸಮಿತಿ ಸದಸ್ಯರಿಗೆ ಯೂ-ಟ್ಯೂಬ್ ಮೂಲಕ ತರಬೇತಿ ನೀಡಲಾಗಿದೆ. |

| | | |
|---|---|---|
| | | 4. ಪ್ರತಿ ವರ್ಷ ಜುಲೈ 30 ರಂದು "ಮಾನವ ಕಳ್ಳ ಸಾಗಾಣಿಕೆ ತಡೆ" ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲು ಭಾಗೀದಾರ ಇಲಾಖೆಗಳಿಗೆ ಅಗತ್ಯ ಕ್ರಮ ವಹಿಸಲು ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಂದ ಸುತ್ತೋಲೆ ಹೊರಡಿಸಲಾಗಿದೆ.<br><br>5. ದಿನಾಂಕ: 30-07-2022 ರಂದು ಮಾನವ ಕಳ್ಳ ಸಾಗಾಣಿಕೆ ತಡೆ ಕುರಿತು ರಾಜ್ಯ ಮಟ್ಟದ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿದೆ.<br><br>6. ಮಹಿಳೆಯರ ಮತ್ತು ಮಕ್ಕಳ ಅಕ್ರಮ ಸಾಗಾಣಿಕೆ ತಡೆಗಟ್ಟಲು ಭಾಗೀದಾರ ಇಲಾಖೆಗಳ ಅಧಿಕಾರಿ/ಸಿಬ್ಬಂದಿಗಳಿಗೆ ನಿಯಮಿತವಾಗಿ ತರಬೇತಿಯನ್ನು ನೀಡಲು ಪ್ರತಿ ಜಿಲ್ಲೆಗೆ ರೂ.25,000/- ಗಳಂತೆ ಒಟ್ಟು ರೂ.7.75 ಲಕ್ಷಗಳ ಅನುದಾನ ಬಿಡುಗಡೆಗೊಳಿಸಲಾಗಿದೆ. |

ಸಂಖ್ಯೆ: ಮಮಇ 22 ಮಭಾಬ 2023

Halappa

(ಆಚಾರ್ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತುಮಕ್ಕಳ
ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ
ಹಿರಿಯ ನಾಗರಿಕರ ಸಬಲೀಕರಣ ಸಚಿವರು.